## ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560 003

ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್–2018/2017–18 ದಿನಾಂಕ: 30.10.2017

**:: ಜ್ಞಾಪನ ::**

ವಿಷಯ:– 2018ನೇ ಏಪ್ರಿಲ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ರಾಜ್ಯದ ಶಾಲಾ/ ಕಾಲೇಜುಗಳಿಂದ ಅರ್ಜಿಗಳನ್ನು ಆಹ್ವಾನಿಸಲು ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ:–1) ಮಂಡಳಿ ಅಧಿಸೂಚನೆ ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್–2018/ 2017–18 ದಿನಾಂಕ: 08.08.2017.

2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರುರವರ ಸುತ್ತೋಲೆ ಸಂಖ್ಯೆ: ಸಿ8(7)ಶಾಶಿಅ/ಮಾನ್ಯತೆ ನವೀಕರಣ/01/2017–18 ದಿನಾಂಕ:03.08.2017

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018ನೇ ಏಪ್ರಿಲ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ರಾಜ್ಯದ ಕೆಲವು ಶಾಲೆಗಳಿಂದ ಹಾಗೂ ಪೋಷಕರಿಂದ ಮಂಡಳಿಗೆ ದೂರವಾಣಿಯ ಮುಖಾಂತರ ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕವನ್ನು ವಿಸ್ತರಿಸಲು ಕೋರಿಕೆಗಳು ಬಂದ ಹಿನ್ನೆಲೆಯಲ್ಲಿ, ಪರೀಕ್ಷಾ ಶುಲ್ಕ ಪಾವತಿ ಹಾಗೂ ಪ್ರಸ್ತಾವನೆ ಸಲ್ಲಿಕೆ ದಿನಾಂಕಗಳನ್ನು ಈ ಕೆಳಕಂಡಂತೆ **ಅಂತಿಮವಾಗಿ** ವಿಸ್ತರಿಸಲಾಗಿದೆ.

| ಕ್ರ ಸಂ | ವಿವರ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|
| 01 | ಖಾಸಗಿ ಅಭ್ಯರ್ಥಿಗಳಾಗಿ ಜಿಲ್ಲಾ ಉಪನಿರ್ದೇಶಕರ ಕಛೇರಿಯಲ್ಲಿ ನೋಂದಣಿ ಮಾಡಿಕೊಳ್ಳುವುದು. | 10.11.2017 |
| 02 | ಶಾಲೆಯವರು ಶಾಲಾ /ಖಾಸಗಿ /ಪುನರಾವರ್ತಿತ ಅಭ್ಯರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕರಿಸಿ ಬ್ಯಾಂಕಿಗೆ NEFT ಚಲನ್ ಮೂಲಕ ಜಮೆ. | 13.11.2017 |
| 03 | ನಾಮಿನಲ್ ರೋಲ್ ಪ್ರಸ್ತಾವನೆ ಹಾಗೂ ಬ್ಯಾಂಕ್ ಚಲನ್‌ನ ಮೂಲ ಪ್ರತಿ ಶಾಲೆಗಳಿಂದ ಮಂಡಳಿಗೆ ತಲುಪಿಸುವುದು. | 14.11.2017 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕಗಳವರೆಗೆ ವಿದ್ಯಾರ್ಥಿಗಳಿಂದ ಶುಲ್ಕ ಸ್ವೀಕರಿಸಬಹುದಾಗಿದೆ. ಇದರ ಸದುಪಯೋಗವನ್ನು ಪಡೆಯುವಲ್ಲಿ ರಾಜ್ಯದ ಎಲ್ಲಾ ಶಾಲಾ ಮುಖ್ಯೋಪಾಧ್ಯಾಯರು ಕ್ರಮವಹಿಸಿ ಕೂಡಲೇ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸಿ ಮೇಲೆ ಸೂಚಿಸಿರುವ ವಿಸ್ತರಣೆ ಮಾಡಿರುವ ದಿನಾಂಕದೊಳಗೆ ಪರೀಕ್ಷಾ ಅರ್ಜಿ ಹಾಗೂ ಪ್ರಸ್ತಾವನೆಗಳನ್ನು ಮಂಡಳಿಗೆ ಸಲ್ಲಿಸುವ ಬಗ್ಗೆ ಕೂಡಲೇ ಕ್ರಮವಹಿಸುವುದು. ಈ ಮಾಹಿತಿಯನ್ನು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲೆಗಳಿಗೆ ಸೂಚಿಸಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ. ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ನೀವೇ ನೇರ ಹೊಣೆಗಾರರಾಗುತ್ತೀರೆಂದು ತಿಳಿಯುವುದು.

(ವಿ. ಸುಮಂಗಲ) 30/10

ನಿರ್ದೇಶಕರು, ಪರೀಕ್ಷೆಗಳು

ಗೆ

1) ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾ ಶಿ ಇ ರವರು ಕೂಡಲೇ ಕ್ರಮವಹಿಸಲು ತಿಳಿಸಿದೆ.
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4) ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.